# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ 2020–21ನೇ ಸಾಲಿನ ಎರಡನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಕಸಂವಾ 107 ಕೆಬಿಎಲ್ ಆಕ 2020, ದಿ: 05.08.2020.
2. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ: ಕೆಅಪ್ರಾ/ ಕಾ–1/ 23/19–20, ದಿ: 08.09.2020.

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ 2020–21ನೇ ಸಾಲಿನ ಮೊದಲನೇ ಕಂತಿನ ಅನುದಾನ ರೂ.50.00ಲಕ್ಷಗಳನ್ನು ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಇವರಿಗೆ ಬಿಡುಗಡೆ ಮಾಡಿ ಆದೇಶವಾಗಿರುತ್ತದೆ.

ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ 2020–21ನೇ ಸಾಲಿನಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಒದಗಿಸಲಾಗಿರುವ ರೂ.200.00ಲಕ್ಷಗಳಲ್ಲಿ ಎರಡನೇ ಕಂತಿನ ಅನುದಾನ ರೂ.50.00ಲಕ್ಷಗಳನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಯನ್ವಯ ಬಿಡುಗಡೆ ಮಾಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

(ರೂ. ಲಕ್ಷಗಳಲ್ಲಿ)

| ಕ್ರಸಂ | ಲೆಕ್ಕ ಶೀರ್ಷಿಕೆ | 2020–21ನೇ ಸಾಲಿನ ಆಯವ್ಯಯ ಹಂಚಿಕೆ | ಬಿಡುಗಡೆ ಮಾಡಬೇಕಾಗಿರುವ ಎರಡನೇ ಕಂತಿನ ಅನುದಾನ |
|---|---|---|---|
| 1. | 2205–00–102–1–81–059 | 200.00 | 50.00 |
| | ಒಟ್ಟು | **200.00** | **50.00** |

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 107 ಕೆಬಿಎಲ್ ಆಕ 2020**
**ಬೆಂಗಳೂರು, ದಿನಾಂಕ: 15.09.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಮುಂದುವರಿದ ಕಾರ್ಯಕ್ರಮಗಳು/ಯೋಜನೆಗಳನ್ನು ಕೈಗೊಳ್ಳಲು 2020–21ನೇ ಸಾಲಿನಲ್ಲಿ ಈ ಕೆಳಕಂಡ ಲೆಕ್ಕ ಶೀರ್ಷಿಕೆಗಳಡಿ ಎರಡನೇ ಕಂತಿನ ಅನುದಾನವಾಗಿ ರೂ.50.00ಲಕ್ಷ (ಐವತ್ತು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಈ ಕೆಳಕಂಡ ಷರತ್ತಿಗೆಗೊಳಪಟ್ಟು ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರಿಗೆ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಿದೆ.

(ರೂ. ಲಕ್ಷಗಳಲ್ಲಿ)

| ಕ್ರಸಂ | ಲೆಕ್ಕ ಶೀರ್ಷಿಕೆ | 2020–21ನೇ ಸಾಲಿನ ಆಯವ್ಯಯ ಹಂಚಿಕೆ | ಬಿಡುಗಡೆ ಮಾಡಬೇಕಾಗಿರುವ ಎರಡನೇ ಕಂತಿನ ಅನುದಾನ |
|---|---|---|---|
| 1. | 2205–00–102–1–81–059 | 200.00 | 50.00 |
| | ಒಟ್ಟು | **200.00** | **50.00** |

**ಷರತ್ತುಗಳು**

1. 2020-21ನೇ ಸಾಲಿನ ಪ್ರಾಧಿಕಾರಕ್ಕೆ ಆಯವ್ಯಯದಲ್ಲಿ ಮೀಸಲಿರಿಸಿದ ಅನುದಾನ ಎಷ್ಟು ಸರ್ಕಾರದಿಂದ ಅನುಮೋದಿತ ಕ್ರಿಯಾ ಯೋಜನೆಯಂತೆ ಹಣ ಬಳಕೆ ಪ್ರಮಾಣ ಪತ್ರವನ್ನು ವಿವರವಾಗಿ ಸಲ್ಲಿಸುವುದು (ಯಾವ ಯಾವ ಕಾರ್ಯಕ್ರಮಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ಪರಿಪೂರ್ಣ ವಿವರ).
2. ಸದರಿ ಅನುದಾನಕ್ಕೆ ಸಂಬಂಧಿಸಿದಂತೆ ಆಡಿಟ್ ಮಾಡಲಾಗಿದೆಯೇ ಮಾಡಿದಲ್ಲಿ ಸಲ್ಲಿಸುವುದು (ಮಾಡದೇ ಇದ್ದಲ್ಲಿ ಆಡಿಟ್ ಮಾಡಿಸುವ ಷರತ್ತಿಗೆಗೊಳಪಟ್ಟು ಪ್ರಸ್ತಾವನೆ ಸಲ್ಲಿಸುವುದು).
3. 2020-21ನೇ ಸಾಲಿನ ಅನುಮೋದಿತ ಕ್ರಿಯಾ ಯೋಜನೆಯಂತೆ ಉಪಯೋಗವಾದ ಹಣದಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ/ಮಾಡಲಾಗಿದೆ ಎಂಬುದರ ಬಗ್ಗೆ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲಾಗಿದೆಯೇ. ಒಂದು ವೇಳೆ ಮಾಡದಿದ್ದಲ್ಲಿ ಎಷ್ಟು ದಿನಗಳೊಳಗಾಗಿ ಮಾಡಲಾಗುವುದು ಎಂಬ ಷರತ್ತಿಗೆ ಒಳಪಟ್ಟು ಪ್ರಸ್ತಾವನೆಯನ್ನು ಸಲ್ಲಿಸುವುದು.
4. 2019-20ನೇ ಸಾಲಿನ ಆಯವ್ಯಯದಲ್ಲಿ ಲೇಖಾನುದಾನದ ಮಿತಿಯೊಳಗೆ ಅನುದಾನವನ್ನು ವೆಚ್ಚ ಮಾಡಲು ಕ್ರಮವಹಿಸತಕ್ಕದ್ದು.
5. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ 1999 ಹಾಗೂ ನಿಯಮಗಳು 2000 ಅನ್ನು ಕಡ್ಡಾಯವಾಗಿ ಪಾಲಿಸುವುದು.
6. ಸದರಿ ಅನುದಾನವನ್ನು ಬಳಸಿಕೊಂಡಿರುವ ಬಗ್ಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2020, ದಿನಾಂಕ: 30.05.2020 ಮತ್ತು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ ವೆಚ್ಚ-7/2020, ದಿನಾಂಕ: 30.05.2020 ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಕೆ.ಸುರೇಶಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
(ಆಡಳಿತ ಕನ್ನಡ)

**ಪ್ರತಿ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ), (ಇ & ಆರ್.ಎಸ್.ಇ)ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಎ &ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
3. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಬೆಂಗಳೂರು.
4. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
5. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ. ಗೋಪುರ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7), ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.